**All India Radio: Bangalore**
**National Bulletin In Kannada**
**26.11.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.11.2025 1.10 p.m.**

**<><><><>**

ಮುಖ್ಯಾಂಶಗಳು

1. ಇಂದು ಸಂವಿಧಾನ ದಿನ: ರಾಷ್ಟ್ರಪತಿ, ಉಪರಾಷ್ಟ್ರಪತಿ ಅವರಿಂದ ಸಂವಿಧಾನ ರಚನಾಕಾರರಿಗೆ ಗೌರವ
2. ಹೈದಾರಾಬಾದ್‌ನಲ್ಲಿ ಸಫ್ರಾನ್ ಏರ್‌ಕ್ರಾಫ್ಟ್ ಎಂಜಿನ್ ಸರ್ವೀಸಸ್ ಇಂಡಿಯಾ ಘಟಕಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
3. ೨೬/೧೧ ರ ಮುಂಬೈ ಭಯೋತ್ಪಾದಕ ದಾಳಿಯಲ್ಲಿ ಮಡಿದ ವೀರ ಯೋಧರಿಗೆ, ನಾಗರಿಕರಿಗೆ ದೇಶಾದ್ಯಂತ ಗೌರವ ಸಮರ್ಪಣೆ
4. ಟೆಸ್ಟ್ ಕ್ರಿಕೆಟ್: ಭಾರತದ ವಿರುದ್ಧ ೨-೦ ಅಂತರದಿಂದ ಸರಣಿ ವಶಪಡಿಸಿಕೊಂಡ ದಕ್ಷಣ ಆಫ್ರಿಕಾ

<><><><>

ನವದೆಹಲಿಯ ಸಂವಿಧಾನ ಸದನ ಸೆಂಟ್ರಲ್ ಹಾಲ್‌ನಲ್ಲಿ ಇಂದು ಸಂವಿಧಾನ ದಿನವನ್ನು ಆಚರಿಸಲಾಯಿತು. ಈ ವೇಳೆ, ರಾಷ್ಟ್ರಪತಿ ಮುರ್ಮು ಸಂವಿಧಾನದ ಪೀಠಿಕೆಯನ್ನು ಓದಿದರು. ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿಯವರು, ಭಾರತೀಯ ಸಂಸತ್ತು ಅನೇಕ ದೇಶಗಳಿಗೆ ಮಾದರಿಯಾಗಿ ನಿಂತಿದೆ. ಸಂವಿಧಾನದ ಮೂಲಕ ಜನರ ಸಾಮೂಹಿಕ ಮತ್ತು ವೈಯಕ್ತಿಕ ಘನತೆಯನ್ನು ರಕ್ಷಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ಸಂವಿಧಾನ ರಚನಾಕಾರರು ಬಯಸಿದ್ದರು ಎಂದು ಹೇಳಿದರು. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮಾತನಾಡಿ, ಸಂವಿಧಾನವು ಬುದ್ಧಿಶಕ್ತಿ ಮತ್ತು ಅನುಭವ, ತ್ಯಾಗ, ಭರವಸೆ ಹಾಗೂ ಆಕಾಂಕ್ಷೆಗಳಿಂದ ಹುಟ್ಟಿಕೊಂಡಿದೆ. ಸಂವಿಧಾನದ ಆತ್ಮವು ಭಾರತವು ಒಂದೇ ಮತ್ತು ಅದು ಶಾಶ್ವತವಾಗಿ ಒಂದೇ ಆಗಿರುತ್ತದೆ ಎಂಬುದನ್ನು ಸಾಬೀತುಪಡಿಸುತ್ತದೆ ಎಂದು ಪ್ರತಿಪಾದಿಸಿದರು. ಈ ಸಂದರ್ಭದಲ್ಲಿ ಸಂವಿಧಾನವನ್ನು ರಚಿಸಿದ ಡಾ.ಬಿ.ಆರ್.ಅಂಬೇಡ್ಕರ್, ಡಾ.ರಾಜೇಂದ್ರ ಪ್ರಸಾದ್,

ಎನ್.ಗೋಪಾಲಸ್ವಾಮಿ ಅಯ್ಯಂಗಾರ್, ಅಲ್ಲಾಡಿ ಕೃಷ್ಣಸ್ವಾಮಿ ಅಯ್ಯರ್ ಸೇರಿದಂತೆ ಇತರರಿಗೆ ಗೌರವ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಉಭಯ ಸದನಗಳ ಸಂಸತ್ ಸದಸ್ಯರು ಪಾಲ್ಗೊಂಡಿದ್ದರು. ಈ ವೇಳೆ, ಮಲಯಾಳಂ, ಮರಾಠಿ, ನೇಪಾಳಿ, ಪಂಜಾಬಿ, ಬೋಡೋ, ಕಾಶ್ಮೀರಿ, ತೆಲುಗು, ಒಡಿಯಾ ಮತ್ತು ಅಸ್ಸಾಮಿ ಸೇರಿದಂತೆ ಒಂಬತ್ತು ಭಾಷೆಗಳಲ್ಲಿ ಸಂವಿಧಾನದ ಅನುವಾದಿತ ಆವೃತ್ತಿಯನ್ನು ಬಿಡುಗಡೆ ಮಾಡಲಾಯಿತು. ಅಲ್ಲದೇ, ಸಂವಿಧಾನ ದಿನದ ಸ್ಮರಣಾರ್ಥ ಕಿರುಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಈ ವರ್ಷ ಸಂವಿಧಾನ ಅಂಗೀಕಾರದ ೭೬ ನೇ ವರ್ಷಾಚರಣೆಯಾಗಿದೆ.

<><><>

ಸಂವಿಧಾನ ದಿನದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಸಂವಿಧಾನದ ರಚನಾಕಾರರಿಗೆ ಗೌರವ ಸಲ್ಲಿಸಿದ್ದಾರೆ. ಸಂವಿಧಾನ ರಚನಾಕಾರರ ದೃಷ್ಟಿಕೋನ ಮತ್ತು ದೂರದೃಷ್ಟಿಯು ಪ್ರತಿಯೊಬ್ಬ ನಾಗರಿಕರಿಗೂ ವಿಕಸಿತ ಭಾರತವನ್ನು ನಿರ್ಮಿಸುವ ಪ್ರಯತ್ನದಲ್ಲಿ ಸ್ಫೂರ್ತಿ ನೀಡುತ್ತಲೇ ಇದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ಹೇಳಿದ್ದಾರೆ. ಸಂವಿಧಾನವು ಘನತೆ, ಸಮಾನತೆ ಮತ್ತು ಸ್ವಾತಂತ್ರ್ಯಕ್ಕೆ ಅತ್ಯಂತ ಪ್ರಾಮುಖ್ಯತೆ ನೀಡುತ್ತದೆ. ದೇಶವಾಸಿಗಳಿಗೆ ಹಕ್ಕುಗಳೊಂದಿಗೆ ಸಂವಿಧಾನವು ಸಬಲೀಕರಣಗೊಳಿಸುತ್ತದೆ. ಸಂವಿಧಾನವು ನಾಗರಿಕರಿಗೆ ಪ್ರತಿಯೊಬ್ಬರ ಕರ್ತವ್ಯ ನೆನಪಿಸುತ್ತದೆ. ಆ ಕರ್ತವ್ಯಗಳನ್ನು ಪೂರೈಸಲು ಪ್ರತಿಯೊಬ್ಬರ ಸದಾ ಪ್ರಯತ್ನಿಸಬೇಕು. ಇವು ಪ್ರಜಾಪ್ರಮಭುತ್ವದ ಅಡಿಪಾಯವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಸಂವಿಧಾನ ದಿನದಂದು ದೇಶವಾಸಿಗಳಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶುಭಾಶಯ ಕೋರಿದ್ದಾರೆ. ನ್ಯಾಯ ಮತ್ತು ಸಮಾನತೆಗಾಗಿ ಬದ್ಧರಾಗಿರಲು ಹಾಗೂ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ದೃಷ್ಟಿಯಲ್ಲಿನ ಭವಿಷ್ಯವನ್ನು ನಿರ್ಮಿಸಲು ಎಲ್ಲರೂ ಒಟ್ಟಾಗಿ ಕೆಲಸ ಮಾಡುವಂತೆ ಅವರು ಮನವಿ ಮಾಡಿದರು.

<><><>

ಹೈದರಾಬಾದ್‌ನ ಜಿಎಂಆರ್ ಏರೋಸ್ಪೇಸ್ ಮತ್ತು ಇಂಡಸ್ಟ್ರಿಯಲ್ ಪಾರ್ಕ್‌ನಲ್ಲಿ ಸಫ್ರಾನ್ ಏರ್‌ಕ್ರಾಫ್ಟ್ ಎಂಜಿನ್ ಸರ್ವೀಸಸ್ ಇಂಡಿಯಾದ ಘಟಕವನ್ನು ಪ್ರಧಾನಿ ನರೇಂದ್ರ ಮೋದಿ ಇಂದು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನಿ, ಭಾರತವು ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ವಾಯುಯಾನ ಮಾರುಕಟ್ಟೆಗಳಲ್ಲಿ

ಒಂದಾಗಿದೆ. ಹೂಡಿಕೆ ಮತ್ತು ನಾವೀನ್ಯತೆಯನ್ನು ಭಾರತ ಸ್ವಾಗತಿಸುತ್ತದೆ. ಉತ್ಪಾದನೆಗೆ ಸಂಬಂಧಸಿದ ಪ್ರೋತ್ಸಾಹಕ ಯೋಜನೆಗಳು ಜಾಗತಿಕ ಕಂಪನಿಗಳು ಭಾರತವನ್ನು ತಮ್ಮ ತಾಣವಾಗಿ ಆಯ್ಕೆ ಮಾಡುವಂತೆ ಆಕರ್ಷಿಸಿವೆ ಎಂದು ಹೇಳಿದರು. ವಿಕಸಿತ ಭಾರತ ನಿಟ್ಟಿನಲ್ಲಿ ಹೂಡಿಕೆದಾರರನ್ನು  ಸರ್ಕಾರ ಪಾಲುದಾರರಾಗಿ ಪರಿಗಣಿಸುತ್ತದೆ. ಜಾಗತಿಕ ಹೂಡಿಕೆದಾರರ ಮತ್ತು ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರ ಅತ್ಯಂತ ಪರಿವರ್ತನಾಶೀಲ ಸುಧಾರಣೆಗಳನ್ನು ಕೈಗೊಂಡಿದೆ ಎಂದರು. ಸ್ವಾವಲಂಬಿ ಭಾರತವನ್ನು ನಿರ್ಮಿಸುವಲ್ಲಿ ಎಸ್.ಎ.ಇ.ಎಸ್.ಐ ಮಹತ್ವದ ಹೆಜ್ಜೆಯಾಗಿದೆ. ಸಫ್ರಾನ್ ಸ್ಥಾಪಿಸಿದ ಈ ನೂತನ ಸೌಲಭ್ಯವು, ಭಾರತವನ್ನು ಜಾಗತಿಕ ನಿರ್ವಹಣೆ, ದುರಸ್ತಿ ಮತ್ತು ಕೂಲಂಕುಶ ಪರೀಕ್ಷೆ ಕೇಂದ್ರವಾಗಿ ಇರಿಸಲು ಕೊಡುಗೆ ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೧೫ ಸೆಕೆಂಡ್ಸ್)**

<><><><>

೨೦೦೮ರಲ್ಲಿ ಮುಂಬೈನಲ್ಲಿ ಭೀಕರ ಭಯೋತ್ಪಾದಕ ದಾಳಿ ನಡೆದು ಇಂದಿಗೆ ೧೭ ವರ್ಷಗಳಿಗೆ ಸಂದಿವೆ. ದೇಶದ ಜನರನ್ನು ರಕ್ಷಿಸಲು ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಧೈರ್ಯಶಾಲಿ ಸೈನಿಕರಿಗೆ ರಾಷ್ಟ್ರಪತಿ ದ್ರೌಪದಿ ಮುಮು ಗೌರವ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ರಾಷ್ಟ್ರಪತಿಗಳು, ದೇಶವು ಯೋಧರ ಮಹೋನ್ನತ ತ್ಯಾಗವನ್ನು ಕೃತಜ್ಞತೆಯಿಂದ ಸ್ಮರಿಸುತ್ತದೆ. ಎಲ್ಲಾ ರೀತಿಯ ಭಯೋತ್ಪಾದನೆಯನ್ನು ಎದುರಿಸಲು ಹಾಗೂ ಬಲವಾದ ಮತ್ತು ಹೆಚ್ಚು ಸಮೃದ್ಧ ಭಾರತವುನ್ನು ನಿರ್ಮಿಸುವ ಸಂಕಲ್ಪದೊಂದಿಗೆ ಪ್ರಗತಿಯ ಹಾದಿಯಲ್ಲಿ ಒಟ್ಟಾಗಿ ಮುಂದುವರಿಯಲು ಪ್ರತಿಯೊಬ್ಬ ನಾಗರಿಕರು ತಮ್ಮ ಬದ್ಧತೆಯನ್ನು ಪುನರುಚ್ಚರಿಸಬೇಕು ಎಂದು ಅವರು ಒತ್ತಾಯಿಸಿದರು. ೨೬/೧೧ ರ ಮುಂಬೈ ಭಯೋತ್ಪಾದಕ ದಾಳಿಯಲ್ಲಿ ಪ್ರಾಣ ಕಳೆದುಕೊಂಡ ಎಲ್ಲಾ ಜನರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಗೌರವ ಸಲ್ಲಿಸಿದ್ದಾರೆ.

<><><><>

ದೆಹಲಿ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಭಯೋತ್ಪಾದಕ ಉಮರ್ ಉನ್ ನಬಿಗೆ ಆಶ್ರಯ ನೀಡಿದ್ದ ಫರಿದಾಬಾದ್ ನಿವಾಸಿಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆ- ಎನ್ಐಎ ಅಧಿಕಾರಿಗಳು ಬಂಧಿಸಿದ್ದಾರೆ. ಬಂಧಿತನನ್ನು ಹರಿಯಾಣದ ಫರಿದಾಬಾದ್ ನಿವಾಸಿ ಸೋಯಬ್

ಎಂದು ಗುರುತಿಸಲಾಗಿದೆ. ಪ್ರಕರಣದಲ್ಲಿ ಇದುವರೆಗೆ ೭ ಆರೋಪಿಗಳನ್ನು ಬಂಧಿಸಲಾಗಿದೆ. ಸ್ಫೋಟಕ್ಕೂ ಮೊದಲು ಭಯೋತ್ಪಾದಕ ನಬಿಗೆ ಸೋಯಬ್ ಆಶ್ರಯ ನೀಡಿದ್ದ. ಈ ಪ್ರಕರಣದಲ್ಲಿ ಬಂಧಿತ ಆರೋಪಿಗಳ ವಿಚಾರಣೆ ಮುಂದುವರಿದಿದೆ ಎಂದು ಎನ್‌ಐಎ ಅಧಿಕಾರಿಗಳು ತಿಳಿಸಿದ್ದಾರೆ.

<><><>

ರಷ್ಯಾ ನೇತೃತ್ವದ ಯುರೇಷಿಯನ್ ಆರ್ಥಿಕ ಒಕ್ಕೂಟದೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಕ್ಕಾಗಿ ಭಾರತ ಇಂದು ಔಪಚಾರಿಕ ಮಾತುಕತೆಗಳನ್ನು ಪ್ರಾರಂಭಿಸಲಿದೆ. ೨೦೨೫ ರ ಆಗಸ್ಟ್ ೨೦ ರಂದು ನಿಯಮಗಳಿಗೆ ಸಹಿ ಹಾಕಿದ ನಂತರ, ರಷ್ಯಾ, ಅರ್ಮೇನಿಯಾ, ಬೆಲಾರಸ್, ಕಝಾಕಿಸ್ತಾನ್ ಮತ್ತು ಕಿರ್ಗಿಸ್ತಾನ್ ಸೇರಿದಂತೆ ಐದು ಸದಸ್ಯರ ಇಎಇಯು ಜೊತೆಗಿನ ಎಫ್‌ಟಿಎ ಚರ್ಚೆಗಳು ನವದೆಹಲಿಯಲ್ಲಿ ಪ್ರಾರಂಭವಾಗಲಿವೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ. ಉಲ್ಲೇಖಿತ ನಿಯಮಗಳು ಭಾರತೀಯ ವ್ಯವಹಾರಗಳಿಗೆ, ವಿಶೇಷವಾಗಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು, ರೈತರು ಹಾಗೂ ಮೀನುಗಾರರಿಗೆ ಹೊಸ ಮಾರುಕಟ್ಟೆಗಳನ್ನು ತೆರೆಯುವತ್ತ ೧೮ ತಿಂಗಳ ಮಾರ್ಗಸೂಚಿಯನ್ನು ರೂಪಿಸುತ್ತವೆ. ಅಮೆರಿಕ ವಿಧಿಸಿದ ಹೆಚ್ಚಿನ ಸುಂಕಗಳ ನಡುವೆ ಭಾರತ ತನ್ನ ರಫ್ತು ತಾಣಗಳನ್ನು ವೈವಿಧ್ಯಗೊಳಿಸಲು ಪ್ರಯತ್ನಿಸುತ್ತಿರುವುದರಿಂದ ಈ ಉಪಕ್ರಮವು ಮಹತ್ವವನ್ನು ಪಡೆಯುತ್ತದೆ. ಇಎಇಯು ಮಾತುಕತೆಗಳ ಹೊರತಾಗಿ, ಭಾರತವು ಹಲವಾರು ಇತರೆ ವ್ಯಾಪಾರ ಪಾಲುದಾರಿಕೆಗಳನ್ನು ಅನುಸರಿಸುತ್ತಿದೆ ಎಂದು ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ದಕ್ಷಿಣ ಆಫ್ರಿಕಾ, ನಮೀಬಿಯಾ, ಬೋಟ್ಸ್ವಾನಾ, ಲೆಸೊಥೊ ಮತ್ತು ಎಸ್ವಾಟಿನಿ ಸೇರಿದಂತೆ ದಕ್ಷಿಣ ಆಫ್ರಿಕಾದ ಕಸ್ಟಮ್ಸ್ ಒಕ್ಕೂಟದೊಂದಿಗೆ ವ್ಯಾಪಾರ ಒಪ್ಪಂದದ ಸಾಧ್ಯತೆಯನ್ನು ಸರ್ಕಾರ ಅನ್ವೇಷಿಸುತ್ತಿದೆ. ಎಸ್‌ಎಸಿಯು ಒಂದು ಶತಮಾನಕ್ಕೂ ಹೆಚ್ಚು ಕಾಲದ ವಿಶ್ವದ ಅತ್ಯಂತ ಹಳೆಯ ಕಸ್ಟಮ್ಸ್ ಒಕ್ಕೂಟವಾಗಿದೆ ಎಂದು ಅವರು ಹೇಳಿದರು. ಬ್ರೆಜಿಲ್, ಅರ್ಜೆಂಟೀನಾ, ಉರುಗ್ವೆ ಮತ್ತು ಪರಾಗ್ವೆಗಳನ್ನು ಒಳಗೊಂಡಿರುವ ಲ್ಯಾಟಿನ್ ಅಮೇರಿಕನ್ ವ್ಯಾಪಾರ ಒಕ್ಕೂಟವಾದ ಮೆರ್ಕೋಸೂರ್ ಜೊತೆ ಎರಡನೇ ಹಂತದ ಆದ್ಯತೆಯ ವ್ಯಾಪಾರ ಒಪ್ಪಂದಕ್ಕಾಗಿ ಭಾರತ ಮಾತುಕತೆಯಲ್ಲಿ ತೊಡಗಿದೆ.

<><><>

ಭಾರತದ ವಿರುದ್ಧ ೨-೦ ಅಂತರದಿಂದ ಟೆಸ್ಟ್ ಕ್ರಿಕೆಟ್ ಸರಣಿಯನ್ನು ದಕ್ಷಿಣ ಆಫ್ರಿಕಾ ತಂಡ ವಶಪಡಿಸಿಕೊಂಡಿದೆ. ಗುವಾಹಟಿಯ ಬರ್ಸಪಾರಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಭಾರತದ ವಿರುದ್ಧ ನಡೆದ ಎರಡನೇ ಮತ್ತು ಅಂತಿಮ ಟೆಸ್ಟ್ ಕ್ರಿಕೆಟ್ ಪಂದ್ಯವನ್ನು ೪೦೮ ರನ್‌ಗಳ ಭಾರೀ ಅಂತರದಿಂದ ದಕ್ಷಿಣ ಆಫ್ರಿಕಾ ತಂಡ ಜಯ ಸಾಧಿಸಿದೆ. ದಕ್ಷಿಣ ಆಫ್ರಿಕಾ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೪೮೯ ರನ್ ಮಾಡಿದ್ದು, ಎರಡನೇ ಇನ್ನಿಂಗ್ಸ್‌ನಲ್ಲಿ ೨೬೦ ರನ್‌ಗಳಿಗೆ ಡಿಕ್ಲೇರ್ ಘೋಷಿಸಿತು. ಭಾರತ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೨೦೧ ರನ್ ಗಳಿಸಿದ್ದು, ಎರಡನೇ ಇನ್ನಿಂಗ್ಸ್‌ನಲ್ಲಿ ಕೇವಲ ೧೪೦ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು.

<><><>

ನವದೆಹಲಿಯಲ್ಲಿಂದು ನಡೆಯಲಿರುವ ರಾಷ್ಟ್ರೀಯ ಹಾಲು ದಿನದ ಕಾರ್ಯಕ್ರಮದಲ್ಲಿ ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ಅವರು, ೨೦೨೫ರ ರಾಷ್ಟ್ರೀಯ ಗೋಪಾಲ ರತ್ನ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ಜಾನುವಾರು ಮತ್ತು ಡೇರಿ ಕ್ಷೇತ್ರಗಳನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಪ್ರಮುಖ ಉಪಕ್ರಮಗಳಿಗೆ ಸಚಿವರು ಚಾಲನೆ ನೀಡಲಿದ್ದಾರೆ.

<><><>

ಉಕ್ರೇನ್‌ನ ಆಗ್ನೇಯ ನಗರವಾದ ಜಪೋರಿಝಿಯಾ ಮೇಲೆ ನಿನ್ನೆ ರಾತ್ರಿ ರಷ್ಯಾ ಪಡೆಗಳು ನಡೆಸಿದ ಡ್ರೋನ್ ದಾಳಿಯಲ್ಲಿ ಕನಿಷ್ಠ ೧೨ ಜನರು ಗಾಯಗೊಂಡಿದ್ದಾರೆ. ಈ ದಾಳಿಯಲ್ಲಿ ಅಂಗಡಿಗಳು, ಕಟ್ಟಡಗಳು ಮತ್ತು ಕಾರುಗಳಿಗೆ ಹಾನಿಯಾಗಿವೆ ಎಂದು ಪ್ರಾದೇಶಿಕ ಗವರ್ನರ್ ಇವಾನ್ ಫೆಡರೋವ್ ತಿಳಿಸಿದ್ದಾರೆ.

<><><>

ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ-ಐಸಿಸಿ ೨೦೨೬ ರ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ವೇಳಾಪಟ್ಟಿಯನ್ನು ಪ್ರಕಟಿಸಿದೆ.  ಈ ಪಂದ್ಯಾವಳಿ ಫೆಬ್ರವರಿ ೭ ರಂದು ಆರಂಭವಾಗಲಿದ್ದು, ಭಾರತ ಮತ್ತು ಶ್ರೀಲಂಕಾ ಜಂಟಿಯಾಗಿ ಆತಿಥ್ಯ ವಹಿಸಲಿವೆ. ಭಾರತ ಮತ್ತು ಪಾಕಿಸ್ತಾನ ನಡುವಿನ ಕ್ರಿಕೆಟ್ ಪಂದ್ಯ ಫೆಬ್ರವರಿ ೧೫ ರಂದು ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆಯಲಿದೆ.

<><><>

ಗುಜರಾತ್‌ನ ಅಹಮದಾಬಾದ್‌ನಲ್ಲಿರುವ ಇಕೆಎ ಅರೆನಾದಲ್ಲಿ ಇಂದು ನಡೆಯಲಿರುವ ಎಎಫ್‌ಸಿ ೧೭ ವರ್ಷದೊಳಗಿನ ಏಷ್ಯನ್ ಕಪ್ ಫುಟ್‌ಬಾಲ್ ೨೦೨೬ ಅರ್ಹತಾ ಗುಂಪಿನ ಡಿ ಪಂದ್ಯದಲ್ಲಿ ಭಾರತ ತಂಡ, ಚೈನೀಸ್ ತೈಪೆ ವಿರುದ್ಧ ಸೆಣಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>